# ಸಿವಿಲ್ ಇಂಜಿನಿಯರಿಂಗ್‌ನಲ್ಲಿ ಸುಸ್ಥಿರ ಪರಿಕಲ್ಪನೆ

**ಮಂಗಳೂರು:** ನಗರದ ವಾಮಂಜೂರಿನ ಸಂತ ಜೋಸೆಫ್ ಇಂಜಿನಿಯರಿಂಗ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ವತಿಯಿಂದ ಸಿವಿಲ್ ಇಂಜಿನಿಯರಿಂಗ್‌ನಲ್ಲಿ ಹೊಸ ರೀತಿಯ ಸುಸ್ಥಿರ ಪರಿಕಲ್ಪನೆಗಳು ಮತ್ತು ತಂತ್ರಜ್ಞಾನಗಳು ವಿಷಯದ ಬಗ್ಗೆ ಅಂತಾರಾಷ್ಟ್ರೀಯ ಸಮ್ಮೇಳನ ನಡೆಯಿತು. ಸಮ್ಮೇಳನ ಉದ್ಘಾಟಿಸಿದ ಐಐಟಿ ಹೈದರಾಬಾದ್‌ನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕ ಪ್ರೊ. ಕೆ.ವಿ.ಎಲ್. ಸುಬ್ರಹ್ಮಣ್ಯಂ ಮಾತನಾಡಿ, ದೇಶದ ಆರ್ಥಿಕತೆಯ ಬೆನ್ನೆಲುಬಿನಲ್ಲಿ ಮೂಲಸೌಕರ್ಯ ಪ್ರಮುಖ ಪಾತ್ರ ವಹಿಸುವುದರಿಂದ ಸಿವಿಲ್ ಇಂಜಿನಿಯರಿಂಗ್‌ನಲ್ಲಿ ಸುಸ್ಥಿರ ಪರಿಕಲ್ಪನೆಗಳ ಅಗತ್ಯವಿದೆ ಎಂದರು. ಸುರತ್ಕಲ್ ಎನ್‌ಐಟಿಕೆಯ ಪ್ರೊ.ಲಕ್ಷ್ಮಣ್ ನಂದಗಿರಿ, ಎಸಿಸಿಇ (ಐ) ಪ್ರಧಾನ ಕಾರ್ಯದರ್ಶಿ ವಿಜಯ ವಿಷ್ಣು ಮಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಎಸ್‌ಜೆಇಸಿಯ ಸಹಾಯಕ ನಿರ್ದೇಶಕ ಫಾ. ಅಲ್ವಿನ್ ರಿಚರ್ಡ್ ಡಿಸೋಜ ಅಧ್ಯಕ್ಷತೆ ವಹಿಸಿದ್ದರು. ಪ್ರಾಂಶುಪಾಲ ಡಾ.ರಿಯೊ ಡಿಸೋಜ ಉಪಸ್ಥಿತರಿದ್ದರು. ಸಿವಿಲ್ ಇಂಜಿನಿಯರಿಂಗ್ ಮುಖ್ಯಸ್ಥ ಡಾ.ಯಜ್ಞೇಶ್ವರನ್ ಬಿ. ಸ್ವಾಗತಿಸಿದರು. ಕಾರ್ಯಕ್ರಮದ ಸಂಚಾಲಕ ಡಾ.ಚಂದ್ರಶೇಖರ್ ಬಿ. ವಂದಿಸಿದರು.



ವಾಮಂಜೂರು ಸೇಂಟ್ ಜೋಸೆಫ್ ಇಂಜಿನಿಯರಿಂಗ್ ಕಾಲೇಜು ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ಐಐಟಿ ಹೈದರಾಬಾದ್‌ನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕ ಪ್ರೊ.ಕೆ.ವಿ.ಎಲ್. ಸುಬ್ರಹ್ಮಣ್ಯಂ, ಸುರತ್ಕಲ್ ಎನ್‌ಐಟಿಕೆಯ ಪ್ರೊ.ಲಕ್ಷ್ಮಣ್ ನಂದಗಿರಿ, ಎಸಿಸಿಇ (ಐ) ಪ್ರಧಾನ ಕಾರ್ಯದರ್ಶಿ ವಿಜಯ ವಿಷ್ಣು ಮಯ್ಯ ಮುಂತಾದವರು ಉಪಸ್ಥಿತರಿದ್ದರು.

Vijayavani, Date: 25/09/22, P. No, 05